# Form No.4.
# Deposition Sheet( R.P.52)

ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಹೆಚ್ಚುವರಿ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಲಯ, ಕಾರ್ಕಳ.

**M.V.C. 279/2024**
**PW 2**

| | | |
|---|---|---|
| ಸಾಕ್ಷಿಯ ಹೆಸರು | ಃ | ಡಾ. ಮೋನಪ್ಪ ನಾಯ್ಕು |
| ತಂದೆ ಹೆಸರು | ಃ | ಐತು ನಾಯ್ಕು |
| ಪ್ರಾಯ | ಃ | 57 ವರ್ಷ |
| ಉದ್ಯೋಗ | ಃ | ಅಸಿಸ್ಟೆಂಟ್ ಪ್ರೋಫೆಸರ್ ಅರ್ಥೋಪೆಡಿಕ್ಸ್, ಕೆಎಂಸಿ ಆಸ್ಪತ್ರೆ, ಮಣಿಪಾಲ |
| ವಾಸ | ಃ | ಮಣಿಪಾಲ |

ದಿನಾಂಕಃ **.18.07.2026** ಪಿಡಬ್ಲ್ಯೂ - 2 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

<u>ಮುಖ್ಯ ವಿಚಾರಣೆಃ</u> ಶ್ರೀ ಅರ್ಜಿದಾರರ ಪರ ವಕೀಲರಿಂದಃ

1. ನಾನು ಈ ಕೇಸಿನ ಸಾಕ್ಷಿದಾರ. ನ್ಯಾಯಾಲಯದ ಸಮನ್ಸ್ ಮೇರೆಗೆ ಈ ಕೇಸಿನಲ್ಲಿ ಹಾಜರಾಗಿದ್ದೇನೆ. ನನ್ನ ಮುಖ್ಯ ವಿಚಾರಣೆಯ ಬದಲಿಗೆ ನಾನು ಈ ದಿನ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು , ಸದರಿ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಅಂಶಗಳು ಸತ್ಯವಾಗಿವೆ.

ನಿಪಿ - 14 ಮತ್ತು ನಿಪಿ - 15 ರ ಮೇಲೆ ನನ್ನ ಸಹಿಗಳನ್ನು ಗುರುತಿಸಿ ಅವುಗಳನ್ನು ನಿಪಿ - 14(ಎ) ಮತ್ತು ನಿಪಿ - 15(ಬಿ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ</u> ಶ್ರೀ ಎ.ಕೆ.ಎ. 3 ನೇ ಎದುರುದಾರರ ಪರ ವಕೀಲರಿಂದಃ

ಅರ್ಜಿದಾರರಿಗೆ ನಾನು ಸ್ವತಃ ಚಿಕಿತ್ಸೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನೀಡಿದ ಚಿಕಿತ್ಸೆ ಫಲಕಾರಿಯಾಗಿದೆ ಎಂದರೆ ಸರಿ. ನನ್ನ ಚಿಕಿತ್ಸೆಯಿಂದ ಅರ್ಜಿದಾರರು ಗುಣಮುಖರಾಗಿದ್ದಾರೆ ಎಂದರೆ ಸರಿ. ಅವರಿಗೆ ಹೆಚ್ಚಿ ನ ಚಿಕಿತ್ಸೆಯ ಅಗತ್ಯ ಇಲ್ಲ ಎಂದರೆ ಸರಿಯಲ್ಲ. ಅರ್ಜಿದಾರರು ಹಿಂದಿನಂತೆ ಅವರ ಕೆಲಸ ಕಾರ್ಯಗಳನ್ನು ಮಾಡಲು ಸಾಧ್ಯವಿಲ್ಲ. ಅರ್ಜಿದಾರರು ಕೊನೆಯ ಬಾರಿಗೆ ನಮ್ಮ ಆಸ್ಪತ್ರೆಗೆ ದಿಃ20.09.2024 ರಂದು ಬಂದಿರುತ್ತಾರೆ. ಅರ್ಜಿದಾರ ಚಿಕಿತ್ಸೆಗೆ ನಾನು ಹೇಳಿದಷ್ಟು ಖರ್ಚು ಆಗಿರುವುದಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ನಾನು ಹೇಳಿದಷ್ಟು ಅಂಗನ್ಯೂನ್ಯತೆ ಆಗಿರುವುದಿಲ್ಲ ಹಾಗೂ ಅವರಿಗೆ ಹೆಚ್ಚಿನ ಪರಿಹಾರ ಕೊಡಿಸಲು ಅವರಿಗೆ ಪೂರಕವಾಗಿ ಸಾಕ್ಷಿ ಹೇಳುತ್ತಿದ್ದೇನ ಎಂದರೆ ಸರಿಯಲ್ಲ. ನಾನು ಗಾಯದ ಪ್ರಮಾಣಪತ್ರವನ್ನು ನೀಡಿರುವುದಿಲ್ಲ. ಅದರಲ್ಲಿ ಏನು ನಮೂದು ಇದೆ ಎಂದು ನನಗೆ ಗೊತ್ತಿಲ್ಲ.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ.

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,

ಕಾರ್ಕಳ